**ದಿನಾಂಕ: 19-02-2022 ರಂದು ಸಮಯ 10.30 ಗಂಟೆಗೆ ವಾರ್ಡ್ 154-ಬಸವನಗುಡಿ ವಾರ್ಡಿಗೆ ಸಂಬಂಧಿಸಿದಂತೆ ವಿವಿದ್ದೋದ್ದೇಶ ಕಟ್ಟಡದಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡವಳಿಗಳು**

## ಹಾಜರಿದ್ದವರು

1. ಶ್ರೀ. ಮಂಜುನಾಥ ರೆಡ್ಡಿ, ವಾರ್ಡ್ ನೋಡಲ್ ಅಧಿಕಾರಿ ಹಾಗೂ ಅಧ್ಯಕ್ಷರು ವಾರ್ಡ್ 154
2. ಶ್ರೀ. ಗಿರೀಶ , ಸಹಾಯಕ ಅಭಿಯಂತರರು, ವಾರ್ಡ್ ಸಂಖ್ಯೆ 154 ಹಾಗೂ ಸದಸ್ಯ ಕಾರ್ಯದರ್ಶಿ
3. ಶ್ರೀ. ಹೇಮಂತ್ ಕುಮಾರ್. ಕೆ.ಹೆಚ್, ಹಿರಿಯ ಆರೋಗ್ಯ ಪರಿವೀಕ್ಷಕರು, ವಾರ್ಡ್ 154
4. ಶ್ರೀ. ಬಾಲಕೃಷ್ಣ. ಎನ್, ಕಿರಿಯ ಆರೋಗ್ಯ ಪರಿವೀಕ್ಷಕರು ವಾರ್ಡ್-154.
5. ಶ್ರೀ. ಎನ್. ನಾರಾಯಣ, ಕಂದಾಯ ಪರಿವೀಕ್ಷಕರು, ವಾರ್ಡ್ 154
6. ಶ್ರೀ. ರಮೇಶ್ ಅರಿಸಿಕೆರಿ, Water Inspector, ಬಿ.ಡಬ್ಲ್ಯೂ.ಎಸ್.ಎಸ್.ಬಿ ವಾರ್ಡ್-154
7. ಶ್ರೀ.ಸದಾನಂದ, ಪೋಲೀಸ್ ಬಸವನಗುಡಿ ಸಂಚಾರಿ ಠಾಣೆ
8. ಶ್ರೀ. ಮುನಿರಾಜು ಕೆ., ಕಿರಿಯ ಅಭಿಯಂತರರು, BESCOM ವಾರ್ಡ್ 154
9. ಶ್ರೀ ರಮೇಶ್ ಬಾಬು

ಸಭೆಯಲ್ಲಿ ಉಪಸ್ಥಿತರಿದ್ದ ವಾರ್ಡ್ ಅಧಿಕಾರಿಗಳಿಗೆ ಸ್ವಾಗತವನ್ನು ಕೋರುತ್ತಾ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ವಾರ್ಡ್ ನೋಡಲ್ ಅಧಿಕಾರಿ ಹಾಗೂ ವಾರ್ಡ್ ಅಧ್ಯಕ್ಷರಾದ ಶ್ರೀ ಮಂಜುನಾಥ ರೆಡ್ಡಿ ರವರು ಪ್ರತಿ ತಿಂಗಳ ಮೊದಲನೇ/ಮೂರನೇ ಶನಿವಾರ ನಡೆಸಬೇಕೆಂದು ತಿಳಿಸುತ್ತ ಸಭೆಯಲ್ಲಿ ಉಪಸ್ಥಿತರಿರುವ ಅಧಿಕಾರಿಗಳನ್ನು ಸ್ವಾಗತಿಸುತ್ತಾ ಈ ಕೆಳಕಂಡ ವಾರ್ಡ್ ಸಮಸ್ಯೆಗಳ ಬಗ್ಗೆ ಚರ್ಚಿಸಲಾಯಿತು.

ನೋಡಲ್ ಅಧಿಕಾರಿಗಳು ಮಾತನಾಡಿ ನಾಗಸಂದ್ರ ಟಾಟಾ ಸಿಲ್ಕಫಾರಂ (4ನೇ ಅಡ್ಡರಸ್ತೆ)ಯಲ್ಲಿ ಹೆಗ್ಗಣಗಳ ಕಾರಣದಿಂದ ಗುಂಡಿ ಬಿದ್ದಿದ್ದು ಇದನ್ನು ಮುಚ್ಚಲು ಕ್ರಮವಹಿಸಲು ಸೂಚಿಸಿದರು.

**ಕ್ರಮ: - ಸಹಾಯಕ ಅಭಿಯಂತರರು ವಾರ್ಡ್-154**
**ರವರಿಗೆ ಕ್ರಮ ವಹಿಸಲು ಸೂಚಿಸಿರುತ್ತಾರೆ.**

**ನೋಡಲ್ ಅಧಿಕಾರಿಗಳು** ಮಾತನಾಡಿ ಬಸವನಗುಡಿ ವಾರ್ಡ ವ್ಯಾಪ್ತಿಯಲ್ಲಿರುವ ಶಿಥಿಲ ಗೊಂಡಿರುವ ಕಟ್ಟಡವನ್ನು **ಪಟ್ಟಿಮಾಡಿ ನೋಟಿಸನ್ನು** ನೀಡಲು ಕ್ರಮ ವಹಿಸಲು ಸೂಚಿಸಿದರು.

**ಕ್ರಮ: - ಸಹಾಯಕ ಅಭಿಯಂತರರು ವಾರ್ಡ್-154**
**ರವರಿಗೆ ಕ್ರಮ ವಹಿಸಲು ಸೂಚಿಸಿರುತ್ತಾರೆ.**

**ನೋಡಲ್ ಅಧಿಕಾರಿಗಳು** ಮಾತನಾಡಿ ಬಸವನಗುಡಿ ವಾರ್ಡ ವ್ಯಾಪ್ತಿಯಲ್ಲಿ ಬುಗಲ್ ರಾಕ್ ರಸ್ತೆ ಪೂರ್ವಾಂಜನೇಯ ರಸ್ತೆಯಲ್ಲಿ ಬೀದಿವ್ಯಾಪಾರಿಗಳ ಹಾವಳಿ ಹೆಚ್ಚಾಗಿದ್ದು ಸದರಿಯವರನ್ನು ತೆರವುಗೊಳಿಸಲು ಕ್ರಮ ವಹಿಸಲು ಸೂಚಿಸಿದರು.

**ಕ್ರಮ: - ಸಹಾಯಕ ಅಭಿಯಂತರರು/ಹಿರಿಯ ಆರೋಗ್ಯ ಪರಿವೀಕ್ಷಕರು,**
**ವಾರ್ಡ್-154 ರವರಿಗೆ ಕ್ರಮ ವಹಿಸಲು ಸೂಚಿಸಿರುತ್ತಾರೆ.**

>>>>2

ನೋಡಲ್ ಅಧಿಕಾರಿಗಳು ಮಾತನಾಡಿ ಬಸವನಗುಡಿ ವಾರ್ಡ ವ್ಯಾಪ್ತಿಯಲ್ಲಿ ಕಂದಾಯ ವಸುಲಿ ಕರಿತು ಸಭೆಯಲ್ಲಿ ಚರ್ಚೆಮಾಡಿ ಸದರಿ ಕಂದಾಯದ ವಿವರಗಳನ್ನು ನೀಡಲು ಕ್ರಮವಹಿಸಲು ಸೂಚಿಸಿದರು.

**ಕ್ರಮ: – ಕಂದಾಯ ಪರಿವೀಕ್ಷಕರು**
**ವಾರ್ಡ್–154 ರವರಿಗೆ ಕ್ರಮ ವಹಿಸಲು ಸೂಚಿಸಿರುತ್ತಾರೆ.**

ನೋಡಲ್ ಅಧಿಕಾರಿಗಳು ಮಾತನಾಡಿ ಬಸವನಗುಡಿ ವಾರ್ಡ ವ್ಯಾಪ್ತಿಯಲ್ಲಿರುವ 5ನೇ ಮತ್ತು 3ನೇ ಮುಖ್ಯರಸ್ತೆಗಳನ್ನು ಡಾಂಬರೀಕರಣ ಮಾಡಲು ಸಂಬಂಧಪಟ್ಟವರಿಗೆ ಸೂಚಿಸಲು ಕ್ರಮವಹಿಸಲು ಸೂಚಿಸಿದರು.

**ಕ್ರಮ: – ಸಹಾಯಕ ಕಾರ್ಯಪಾಲಕ ಅಭಿಯಂತರರು**
**ರಸ್ತೆ ಮತ್ತು ಮೂಲಭೂತ ಸೌಕರ್ಯ ರವರಿಗೆ ಕ್ರಮ ವಹಿಸಲು**
**ಸೂಚಿಸಿರುತ್ತಾರೆ.**

ನೋಡಲ್ ಅಧಿಕಾರಿಗಳು ಮಾತನಾಡಿ ಬಸವನಗುಡಿ ವಾರ್ಡ ವ್ಯಾಪ್ತಿಯಲ್ಲಿರುವ ಬೆಸ್ಕಾಂ ಇಲಾಖೆಯವರು ಮರದ ರೆಂಬೆಗಳನ್ನು ಕಡಿದು ಅಲ್ಲಲ್ಲಿ ರಸ್ತೆ ಬದಿ ಹಾಕಿದ್ದು ಇದನ್ನು ತೆರವುಗೊಳಿಸಲು ಕ್ರಮವಹಿಸಲು ಸೂಚಿಸಿದರು.

**ಕ್ರಮ: – ಹಿರಿಯ ಆರೋಗ್ಯ ಪರಿವೀಕ್ಷಕರು,**
**ವಾರ್ಡ್–154 ರವರಿಗೆ ಕ್ರಮ ವಹಿಸಲು ಸೂಚಿಸಿರುತ್ತಾರೆ.**

ವಂದನೆಗಳೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

AE 154 19/2

19/2
ಅಧ್ಯಕ್ಷರು ಹಾಗೂ ನೋಡಲ್ ಅಧಿಕಾರಿ
ವಾರ್ಡ್ ಸಂಖ್ಯೆ 154–ಬಸವನಗುಡಿ

<u>ಪ್ರತಿಯನ್ನು:</u>

1) ಮಾನ್ಯ ಆಯುಕ್ತರು ರವರ ಆಪ್ತ ಶಾಖೆಗೆ ಅವಗಾಹನೆಗೆ ತರಲು ಕಳುಹಿಸಿದೆ.
2) ವಲಯ ಆಯುಕ್ತರು (ದಕ್ಷಿಣ) ರವರ ಅವಗಾಹನೆಗೆ.
3) ಜಂಟಿ ಆಯುಕ್ತರು (ದಕ್ಷಿಣ) ರವರ ಅವಗಾಹನೆಗೆ.
4) ಮುಖ್ಯ ಅಭಿಯಂತರರು (ದಕ್ಷಿಣ) ರವರ ಅವಗಾಹನೆಗೆ,
5) ಕಾರ್ಯಪಾಲಕ ಅಭಿಯಂತರರು (ಬಸವನಗುಡಿ) /ಸ.ಕಾ.ನಿ.ಅ (ಬ.ಗು) ಉಪವಿಭಾಗ ರವರ ಅವಗಾಹನೆಗೆ.
6) ಆರೋಗ್ಯ ವೈದ್ಯಾಧಿಕಾರಿಗಳು, ಬಸವನಗುಡಿ ವಿಭಾಗ ರವರ ಅವಗಾಹನೆಗೆ.
7) ಪೋಲೀಸ್ ಇನ್ಸ್‌ಪೆಕ್ಟರ್, ಬಸವನಗುಡಿ ಕಾನೂನು ಸುವ್ಯವಸ್ಥೆ ಪೋಲೀಸ್ ಠಾಣೆ ರವರ ಅವಗಾಹನೆಗೆ.
8) ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು, ಬಿಡಬ್ಲ್ಯೂಎಸ್‌ಎಸ್‌ಬಿ, ಎಂ.ಎನ್.ಕೆ ಪಾರ್ಕ್, ಬಸವನಗುಡಿ ರವರ ಅವಗಾಹನೆಗೆ.
9) ಸಂಬಂಧಪಟ್ಟ ಅಧಿಕಾರಿಗಳಿಗೆ ಹಾಗೂ ಮುಂದಿನ ಕ್ರಮಕ್ಕಾಗಿ.
10) ಕಛೇರಿ ಕಡತಕ್ಕೆ.